ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 21/11/20

# ಅಧಿವೇಶನದಲ್ಲಿ ಗೋಹತ್ಯೆ ನಿಷೇಧ ಮಸೂದೆ ಮಂಡನೆ

ಬೆಂಗಳೂರು: ರಾಜ್ಯದಲ್ಲಿ ಲವ್ ಜಿಹಾದ್ ನಿಷೇಧಿಸಿ ಕಾಯ್ದೆ ಜಾರಿಗೊಳಿಸುವುದಾಗಿ ಈಗಾಗಲೇ ಘೋಷಿಸಿರುವ ರಾಜ್ಯ ಸರ್ಕಾರ ಇದೀಗ ಗೋಹತ್ಯೆ ನಿಷೇಧ ಕಾಯ್ದೆಯನ್ನೂ ಜಾರಿಗೊಳಿಸಲು ಸಿದ್ಧತೆ ನಡೆಸಿದೆ. ಈ ಕುರಿತು ರಾಜ್ಯ ಬಿಜೆಪಿ ತನ್ನ ಅಧಿಕೃತ ಟ್ವಿಟರ್ ಖಾತೆಯಲ್ಲಿ ಹೇಳಿಕೆ ನೀಡಿದ್ದು, ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಮಸೂದೆ ಮಂಡಿಸಬೇಕೆಂದು ಒತ್ತಾಯಿಸಿದೆ.

ಈಚೆಗಷ್ಟೇ ಗೃಹ ಸಚಿವ ಬಸವರಾಜ ಬೊಮ್ಮಾಯಿ ರಾಜ್ಯದಲ್ಲಿ ಲವ್ ಜಿಹಾದ್ ವಿರುದ್ಧ ಶೀಘ್ರವೇ ಕಾಯ್ದೆ ಜಾರಿಗೊಳಿಸುವುದಾಗಿ ಪ್ರಕಟಿಸಿದ್ದರು. ಇದೀಗ ರಾಜ್ಯ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಕಟೀಲು ಅವರು ಗೋಹತ್ಯೆ ನಿಷೇಧ ಕಾಯ್ದೆ ಜಾರಿಗೊಳಿಸುವಂತೆ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಹಾಗೂ ರಾಜ್ಯದ ಪಶು ಸಂಗೋಪನಾ ಖಾತೆ ಸಚಿವ ಪ್ರಭು ಚವಾಣ್ ಅವರಿಗೆ ಸೂಚನೆ ನೀಡಿದ್ದಾಗಿ ಟ್ವೀಟ್ ಮಾಡಿದ್ದಾರೆ. ಹೀಗಾಗಿ ಡಿಸೆಂಬರ್ 7ರಿಂದ 15ರವರೆಗೆ ನಡೆಯಲಿರುವ ವಿಧಾನಮಂಡಲ ಅಧಿವೇಶದನದಲ್ಲಿ ಗೋಹತ್ಯೆ ನಿಷೇಧ ಹಾಗೂ ಲವ್ ಜಿಹಾದ್ ನಿಷೇಧ ಕಾಯ್ದೆ ಜಾರಿಗಾಗಿ ಉಭಯ ಸದನಗಳಲ್ಲಿ ಮಸೂದೆ ಮಂಡನೆಯಾಗುವುದು ಬಹುತೇಕ ಖಚಿತವಾಗಿದೆ.